# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 619 |
| ಸದಸ್ಯರ ಹೆಸರು | ಶ್ರೀ (ಛಲವಾದಿ) ಟಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | 11.07.2023 |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರೈತರು ಜೇನು ಕೃಷಿಯಲ್ಲಿ ತೊಡಗಿಕೊಳ್ಳಲು ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು: (ವಿವರಗಳೊಂದಿಗೆ ಮಾಹಿತಿ ನೀಡುವುದು)</td><td>ರೈತರು ಜೇನು ಕೃಷಿಯಲ್ಲಿ ತೊಡಗಿಕೊಳ್ಳಲು ತೋಟಗಾರಿಕೆ ಇಲಾಖೆಯಿಂದ ರಾಜ್ಯವಲಯ ಮತ್ತು ಜಿಲ್ಲಾವಲಯದಡಿ ಮಧುವನ ಮತ್ತು ಜೇನು ಸಾಕಾಣೆ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲಾಗಿದೆ ಹಾಗೂ ಜೇನು ಕೃಷಿಯಲ್ಲಿ ತೊಡಗಿಕೊಂಡಿರುವ ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡಲು ಹಾಗೂ ಜೇನು ಕೃಷಿ ಉತ್ತೇಜಿಸಲು ಕೆಳಕಂಡಂತೆ ನೆರವು ನೀಡಲಾಗಿರುತ್ತದೆ.
<table>
<tr><th>ಕ್ರ. ಸಂ</th><th>ಕಾರ್ಯಕ್ರಮ</th><th>ನಿಗಧಿತ ದರ</th><th>ಸಹಾಯಧನ</th></tr>
<tr><td>1</td><td>ಜೇನು ಕೃಷಿ ತರಬೇತಿ ಕಾರ್ಯಕ್ರಮ (2 ದಿನಗಳ ಅವಧಿ)</td><td>ರೂ.800 / ಪ್ರತಿ ಫಲಾನುಭವಿಗೆ</td><td>100%</td></tr>
<tr><td>2</td><td>ಜೇನು ಪೆಟ್ಟಿಗೆ, ಕುಟುಂಬ ಹಾಗೂ ಸ್ಟ್ಯಾಂಡ್ ಖರೀದಿಗೆ ಸಹಾಯಧನ</td><td>ರೂ.4500/- ಘಟಕ</td><td>ರೂ.3375/- (75% - ಸಾಮಾನ್ಯ) Rs.4050/- (90% ಪ.ಜಾ/ಪ.ಪಂ)</td></tr>
<tr><td>3</td><td>ಖಾಸಗಿ ಮಧುವನ ಸ್ಥಾಪನೆಗೆ ಸಹಾಯಧನ.</td><td>ರೂ.1.00 ಲಕ್ಷ</td><td>ರೂ.0.75 ಲಕ್ಷ (75%)</td></tr>
<tr><td>4</td><td>ಜೇನು ತೆಗೆಯುವ ಯಂತ್ರ ಖರೀದಿಗೆ ಸಹಾಯಧನ</td><td>ರೂ.5000/- ಘಟಕ</td><td>ರೂ.3750/- (75%)</td></tr>
</table>
2022-23ನೇ ಸಾಲಿನಲ್ಲಿ ರಾಜ್ಯವಲಯ ಮತ್ತು ಜಿಲ್ಲಾವಲಯದ ಮಧುವನ ಮತ್ತು ಜೇನು ಸಾಕಾಣೆ ಅಭಿವೃದ್ಧಿ ಯೋಜನೆಗಳಡಿ ಒಟ್ಟು 3323 ಸಂಖ್ಯೆ ಫಲಾನುಭವಿಗಳಿಗೆ ಜೇನು ಕೃಷಿ ತರಬೇತಿ, 13,845 ಸಂಖ್ಯೆ ಜೇನು ಪೆಟ್ಟಿಗೆ, ಕುಟುಂಬ ಹಾಗೂ ಸ್ಟ್ಯಾಂಡ್ ಖರೀದಿಗೆ, 75 ಸಂಖ್ಯೆ ಖಾಸಗಿ ಮಧುವನ ಸ್ಥಾಪನೆಗೆ, ಮತ್ತು 143 ಸಂಖ್ಯೆ ಜೇನು ತೆಗೆಯುವ ಯಂತ್ರ ಖರೀದಿಗೆ ಫಲಾನುಭವಿಗಳಿಗೆ ಸಹಾಯಧನದ ನೆರವು ನೀಡಲಾಗಿದೆ.</td></tr>
</table>

| | | |
|---|---|---|
| ಆ) | ಜೇನು ಕೃಷಿಯಲ್ಲಿ ತೊಡಗಿಕೊಂಡಿರುವ ರೈತರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡಲು ಹಾಗೂ ಜೇನು ಕೃಷಿ ಉತ್ತೇಜಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: | ಸದರಿ ಸಹಾಯಧನವನ್ನು ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸಬಲರಾಗಲು ಅವಕಾಶ ಕಲ್ಪಿಸಿಕೊಡಲಾಗಿದೆ. |
| ಇ) | ಜೇನು ಕೃಷಿಯ ಬಗ್ಗೆ ರಾಜ್ಯದ ರೈತರಿಗೆ ಅರಿವು ಮೂಡಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ? | ಜೇನು ಕೃಷಿಯ ಬಗ್ಗೆ ರಾಜ್ಯದ ರೈತರಿಗೆ ಅರಿವು ಮೂಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಈ ಕೆಳಕಂಡಂತಿದೆ;<br>1. ಜೇನು ಕೃಷಿ ಕೈಗೊಳ್ಳಲು ಆಸಕ್ತಿ ಹೊಂದಿರುವರೈತರು / ರೈತ ಮಹಿಳೆಯರು ಹಾಗೂ ಇತರರಿಗೆ ಜೇನು ಕೃಷಿ ತರಬೇತಿಯನ್ನು ನೀಡಲಾಗುತ್ತಿದೆ.<br>2. ಕೊಡಗು ಜಿಲ್ಲೆಯ ಭಾಗಮಂಡಲ ಸರ್ಕಾರಿ ಜೇನುಕೃಷಿ ತಾಂತ್ರಿಕ ತರಬೇತಿ ಕೇಂದ್ರದಲ್ಲಿ ರಾಜ್ಯದ ಅರ್ಹ ರೈತ ಮಕ್ಕಳಿಗೆ 3 ತಿಂಗಳ ಅವಧಿಯ ವಸತಿ ಸಹಿತ ಪ್ರಮಾಣ ಪತ್ರ ಜೇನುಕೃಷಿ ತರಬೇತಿಯನ್ನು ನೀಡಲಾಗುತ್ತಿದೆ.<br>3. ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಜೇನು ಕೃಷಿಯ ಬಗ್ಗೆ ಹೆಚ್ಚಿನ ಪ್ರಚಾರ ನೀಡಲು ಮಧುಮೇಳ ಹಾಗೂ ಮಧುಮಹೋತ್ಸವಗಳನ್ನು ಆಯೋಜಿಸಲಾಗುತ್ತಿದೆ ಹಾಗೂ ಜೇನು ಕೃಷಿಯ ಬಗ್ಗೆ ಕರಪತ್ರಗಳನ್ನು ಮುದ್ರಿಸಿ ವಿತರಿಸಲಾಗುತ್ತಿದೆ.<br>4. ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಜೇನುತುಪ್ಪಕ್ಕೆ ಮಾರುಕಟ್ಟೆ ಉತ್ತೇಜಿಸಲು ಬ್ರ್ಯಾಂಡ್ ಅಭಿವೃದ್ಧಿಪಡಿಸಲು ಕ್ರಮ ವಹಿಸಲಾಗುತ್ತಿದೆ. |

**HORTI 238 HGM 2023**

(ಎಸ್.ಎಸ್.ಮಲ್ಲಿಕಾರ್ಜುನ್)
ಗಣಿ ಮತ್ತು ಭೂವಿಜ್ಞಾನ,
ತೋಟಗಾರಿಕೆ ಸಚಿವರು